APRIL 27,2025
ALL INDIA RADIO- DHARWAD
PRADESH SAMACHARA (KANNADA) 12PM

<><><>

ಆಕಾಶವಾಣಿ

ಪ್ರದೇಶ ಸಮಾಚಾರ

<><><>

ಪಹಲಗಾಮ್ ನಲ್ಲಿ ನಡೆದ ಭಯೋತ್ಪಾದಕ ಕೃತ್ಯ ದೇಶದ ಪ್ರತಿಯೊಬ್ಬ ನಾಗರಿಕನನ್ನು ದುಃಖದ ಮಡುವಿನಲ್ಲಿ ಮುಳುಗಿಸಿದೆ. ಸಂತ್ರಸ್ತ ಕುಟುಂಬಗಳ ಬಗ್ಗೆ ಪ್ರತಿ ಭಾರತೀಯನಲ್ಲೂ ಅಪಾರವಾದ ಸಹಾನುಭೂತಿಯಿದೆ. ಭಯೋತ್ಪಾದಕ ದಾಳಿಯ ನಂತರ, ಜಾಗತಿಕ ನಾಯಕರು ಕರೆ ಮಾಡಿ ಸಂತಾಪ ಸೂಚಿಸಿದ್ದು, ಸಂದೇಶಗಳ ಮೂಲಕ ಘೋರ ಕೃತ್ಯವನ್ನು ಖಂಡಿಸಿದ್ದಾರೆ ಎಂದು ಪ್ರಧಾನಮಂತ್ರಿ ನರೇಂದ್ರ ಮೋದಿ ಹೇಳಿದರು. ಆಕಾಶವಾಣಿಯ ಜನಪ್ರಿಯ, ಮನ್ ಕಿ ಬಾತ್ ಕಾರ್ಯಕ್ರಮದ, 121 ನೇ ಆವೃತ್ತಿಯಲ್ಲಿ ದೇಶ, ವಿದೇಶಗಳ ಜನತೆಯನ್ನು ಉದ್ದೇಶಿಸಿ ಅವರು ಮಾತನಾಡಿದರು. ಭಯೋತ್ಪಾದನೆ ವಿರುದ್ಧದ ಹೋರಾಟದಲ್ಲಿ ಇಡೀ ಜಗತ್ತು 140 ಕೋಟಿ ಭಾರತೀಯರೊಂದಿಗೆ ನಿಂತಿದೆ ಎಂದರು. ಸಂತ್ರಸ್ತ ಕುಟುಂಬಗಳಿಗೆ ನ್ಯಾಯ ಸಿಗಲಿದೆ ಎಂದು ಭರವಸೆ ವ್ಯಕ್ತಪಡಿಸಿದರು.

<><><>

ಮನದ ಮಾತಿನಲ್ಲಿ, ಅಗಲಿದ ಹಿರಿಯ ವಿಜ್ಞಾನಿ ಡಾಕ್ಟರ ಕಸ್ತೂರಿರಂಗನ್ ಅವರ ವೈಜ್ಞಾನಿಕ ಕ್ಷೇತ್ರದ ಕೊಡುಗೆಗಳನ್ನು ಸ್ಮರಿಸಿದ ಪ್ರಧಾನಮಂತ್ರಿಯವರು, ವಿಜ್ಞಾನ, ಶಿಕ್ಷಣ ಮತ್ತು ಭಾರತದ ಬಾಹ್ಯಾಕಾಶ ಕಾರ್ಯಕ್ರಮವನ್ನು ಹೊಸ ಎತ್ತರಕ್ಕೆ ಕೊಂಡೊಯ್ಯುವಲ್ಲಿ ಡಾಕ್ಟರ್ ಕಸ್ತೂರಿರಂಗನ್ ಕೊಡುಗೆ ಸದಾ ಸ್ಮರಣೀಯ ಎಂದರು.

<><><>

ಬಾಗಲಕೋಟೆ ಜಿಲ್ಲೆಯ ಸೇಬು ಕೃಷಿಕ ಶ್ರೀ ಶೈಲ್ ತೇಲಿ ಅವರ ಸೇಬು ಕೃಷಿ ಯಶೋಗಾಥೆಯ ಬಗ್ಗೆ ಮನದ ಮಾತಿನಲ್ಲಿ ಉಲ್ಲೇಖಿಸಿದ ಪ್ರಧಾನಮಂತ್ರಿ ನರೇಂದ್ರ ಮೋದಿ ಅವರು, 35 ಡಿಗ್ರಿಗಿಂತ ಅಧಿಕ ತಾಪಮಾನವಿರುವ ಕುಲಾಲೀ ಗ್ರಾಮದಲ್ಲಿ ತೇಲಿ ಅವರು ಬೆಳೆದ ಸೇಬಿನ ಮರಗಳು ಫಲ ನೀಡುತ್ತಿವೆ, ಇದು ಅವರ ಪ್ರಯತ್ನಕ್ಕೆ ಸಂದ ಪ್ರತಿಫಲವಾಗಿದೆ ಎಂದರು.

<><><>

ಕೇಂದ್ರ ಸರಕಾರ, ಖೇಲೋ ಇಂಡಿಯಾ ಉಪಕ್ರಮದ ಮೂಲಕ ದೇಶದ ಪ್ರತಿಭಾವಂತ ಯುವ ಕ್ರೀಡಾಳುಗಳಿಗೆ ಹೆಚ್ಚಿನ ಪ್ರೋತ್ಸಾಹ ನೀಡುತ್ತಿದೆ, ಕ್ರೀಡಾ ಕ್ಷೇತ್ರದ ಮೂಲಸೌಕರ್ಯ ಕಲ್ಪಿಸುವಲ್ಲಿ ದೃಢ ಹೆಜ್ಜೆಯಿರಿಸಿದೆ ಎಂದು ಕೇಂದ್ರ ಕ್ರೀಡಾ ಮತ್ತು ಯುವಜನ ಸೇವಾ ಇಲಾಖೆ ರಾಜ್ಯ ಸಚಿವೆ ರಕ್ಷಾ ನಿಖಿಲ್ ಖಡ್ಸೆ ಹೇಳಿದರು.

ಹುಬ್ಬಳ್ಳಿಯ  ಲೋಹಿಯಾ ನಗರದಲ್ಲಿ ನಿರ್ಮಾಣಗೊಳ್ಳುತ್ತಿರುವ, ವಿಶ್ವ ದರ್ಜೆಯ 'ಕ್ರೀಡಾ ಸಂಕೀರ್ಣ' ಸ್ಥಳಕ್ಕೆ ಭೇಟಿ ನೀಡಿ, ಕಾಮಗಾರಿ ಪರಿಶೀಲಿಸಿ ಬಳಿಕ ಸುದ್ದಿಗೋಷ್ಠಿ ಉದ್ದೇಶಿಸಿ ಅವರು ಮಾತನಾಡಿದರು.

<><><>

ಬೈಟ್: ರಕ್ಷಾ ನಿಖಿಲ್ ಖಡ್ಸೆ 37 ಸೆಕೆಂದುಗಳು

<><><>

ವಿಧಾನ ಸಭೆ, ವಿರೋಧ ಪಕ್ಷದ ಉಪನಾಯಕ ಅರವಿಂದ ಬೆಲ್ಲದ ಮಾತನಾಡಿ,  ಕೇಂದ್ರ ಸರಕಾರ ಅನುದಾನ ಹಾಗೂ ಸ್ಮಾರ್ಟ್‌ಸಿಟಿ ಯೋಜನೆಯಡಿ ಒಟ್ಟು 180 ಕೋಟಿ ರೂಪಾಯಿ ವೆಚ್ಚದಲ್ಲಿ ನಿರ್ಮಿಸಲಾಗುತ್ತಿರುವ ಹುಬ್ಬಳ್ಳಿಯ ಸ್ಪೋರ್ಟ್ಸ್ ಕಾಂಪ್ಲೆಕ್ಸ್ ಕಾಮಗಾರಿಯು ಮುಕ್ತಾಯದ ಹಂತಕ್ಕೆ ತಲುಪಿದೆ, ಆಗಸ್ಟ ತಿಂಗಳಲ್ಲಿ ಉದ್ಘಾಟನೆಗೆ ಸಿದ್ಧವಾಗಲಿದೆ ಎಂದರು.

<><><>

ಕರ್ನಾಟಕ ಉಚ್ಚ ನ್ಯಾಯಾಲಯದ, ಧಾರವಾಡ ಪೀಠ ಆಯೋಜಿಸಿದ, ಲೋಕ ಅದಾಲತ್ತಿನಲ್ಲಿ ಒಟ್ಟು ಸಾವಿರದ 274 ಪ್ರಕರಣಗಳಲ್ಲಿ, 173 ಪ್ರಕರಣಗಳನ್ನು ಇತ್ಯರ್ಥಪಡಿಸಲಾಯಿತು. ನ್ಯಾಯಮೂರ್ತಿ ಎಸ್.ಜಿ ಪಂಡಿತ್ ವಿಶೇಷ ಲೋಕ ಅದಾಲತ್ ನೇತೃತ್ವ ವಹಿಸಿದ್ದರು.

<><><>

ಬೆಂಗಳೂರು ಗ್ರಾಮಾಂತರ ಜಿಲ್ಲಾಡಳಿತದ ವತಿಯಿಂದ, ದೇವನಹಳ್ಳಿ ತಾಲ್ಲೂಕಿನ ಕುಂದಾಣ ಹೋಬಳಿಯ ಭೈರದೇನಹಳ್ಳಿಯಲ್ಲಿ, ರಾಜ್ಯ ಸರ್ಕಾರದ ಎರಡು ವ ʼ೯ದ ಸಾಧನೆ ಸಮಾವೇಶ ಹಾಗೂ ವಿವಿಧ ಕಾಮಗಾರಿಗಳ ಉದ್ಘಾಟನೆ, ಶಂಕುಸ್ಥಾಪನೆ ಮತ್ತು ಫಲಾನುಭವಿಗಳಿಗೆ ಸವಲತ್ತು ವಿತರಣೆ ಕಾರ್ಯಕ್ರಮ ಇಂದು ಆಯೋಜಿಸಲಾಗಿದೆ. ಮುಖ್ಯಮಂತ್ರಿ ಸಿದ್ದರಾಮಯ್ಯ ಕಾರ್ಯಕ್ರಮ ಉದ್ಘಾಟಿಸಲಿದ್ದಾರೆ. ಜಿಲ್ಲಾ ಉಸ್ತುವಾರಿ ಸಚಿವರಾದ ಕೆ.ಎಚ್. ಮುನಿಯಪ್ಪ ಭಾಗವಹಿಸಲಿದ್ದಾರೆ.

<><><>

ಏಳನೇ ಸುತ್ತಿನ ರಾಷ್ಟ್ರೀಯ ಕಾಲುಬಾಯಿ ರೋಗ ಲಸಿಕಾ ಕಾರ್ಯಕ್ರಮಕ್ಕೆ ಗದಗ ಜಿಲ್ಲೆಯ ಬಿಂಕದಕಟ್ಟಿ ಗ್ರಾಮದಲ್ಲಿ ಗ್ರಾಮ ಪಂಚಾಯತ್ ಅಧ್ಯಕ್ಷೆ ತುಳಸಾ ತಿಮ್ಮನಗೌಡ್ರ ಚಾಲನೆ ನೀಡಿದರು.

<><><>

ಕೋಲಾರ ತಾಲೂಕಿನ ನರಸಾಪುರ ಗ್ರಾಮ ಪಂಚಾಯಿತಿ ಅಧ್ಯಕ್ಷ ಸ್ಥಾನಕ್ಕೆ ನಡೆದ ಚುನಾವಣೆಯಲ್ಲಿ ಗ್ರಾಮದ  ಎನ್.ಎಂ ಕುಮಾರ್ ಆಯ್ಕೆಯಾಗಿದ್ದಾರೆ.

<><><>

ಮಲೇರಿಯಾ ಬಾಧೆಯನ್ನು ರಕ್ತ ಪರೀಕ್ಷೆ ಮಾಡುವುದರ ಮೂಲಕ ಕಂಡು ಹಿಡಿಯಬಹುದು. ಅದಕ್ಕೆ ಸರಿಯಾಗಿ ಚಿಕಿತ್ಸೆಯನ್ನು ತೆಗೆದುಕೊಂಡರೆ ರೋಗವನ್ನು ಗುಣಪಡಿಸಬಹುದು ಎಂದು ಮುಂಡರಗಿ ತಾಲೂಕು ವೈದ್ಯಾಧಿಕಾರಿ ಡಾಕ್ಟರ್ ಲಕ್ಷ್ಮಣ ಪೂಜಾರ ಹೇಳಿದರು. ಗದಗ ಜಿಲ್ಲೆಯ ಮುಂಡರಗಿಯ ತಾಲೂಕು ಆರೋಗ್ಯ ಇಲಾಖೆಯ ವತಿಯಿಂದ ಆಯೋಜಿಸಲಾದ, ವಿಶ್ವ ಮಲೇರಿಯಾ ಜಾಗೃತಿ ದಿನ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಅವರು ಮಾತನಾಡಿದರು.

<><><>

ಇಲ್ಲಿಗೆ ಪ್ರದೇಶ ಸಮಾಚಾರ ಮುಕ್ತಾಯವಾಯಿತು.

<><><>

ನಮ್ಮ ಮುಂದಿನ ರಾಷ್ಟ್ರೀಯ ವಾರ್ತಾ ಪ್ರಸಾರ, ಮಧ್ಯಾಹ್ನ 1 ಗಂಟೆ 10 ನಿಮಿಷಕ್ಕೆ.

<><><>